ಕರ್ನಾಟಕ ಸರ್ಕಾರ
ರಾಷ್ಟ್ರೀಯ ಸೇವಾ ಯೋಜನೆ
ಪದವಿ ಪೂರ್ವ ಶಿಕ್ಷಣ ಇಲಾಖೆ

ಸಂಖ್ಯೆ:ಪಪೂಶಿಇ/ರಾಸೇಯೋ/ವಿ.ಪು.ಕಾ/33/2015-16 ದಿನಾಂಕ: 15-12-2015

ಸುತ್ತೋಲೆ

ವಿಷಯ: ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾರಿಗಳಿಗೆ ಬೆಂಗಳೂರು ವಿಭಾಗ ಮಟ್ಟದಲ್ಲಿ ಸಭೆ ನಡೆಸುವ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ರಾಷ್ಟ್ರೀಯ ಸೇವಾ ಯೋಜನೆಗೆ ಸಂಬಂಧಿಸಿದಂತೆ ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾರಿಗಳಿಗೆ ಬೆಂಗಳೂರು ವಿಭಾಗ ಮಟ್ಟದಲ್ಲಿ 2015-16 ನೇ ಸಾಲಿಗೆ ಹಮ್ಮಿಕೊಳ್ಳಬಹುದಾದ ಕಾರ್ಯಚಟುವಟಿಕೆಗಳ ಬಗ್ಗೆ ಮಾಹಿತಿ ನೀಡುವ ಸಲುವಾಗಿ ನಿರ್ದೇಶಕರು ರಾಷ್ಟ್ರೀಯ ಸೇವಾ ಯೋಜನೆ ಪ್ರಾಂತೀಯ ಕೇಂದ್ರ ಭಾರತ ಸರ್ಕಾರ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಸಭೆಯನ್ನು ದಿನಾಂಕ 30-12-2015 ರಂದು ಬೆಳಗ್ಗೆ 09:30 ಗಂಟೆಗೆ ಸರಿಯಾಗಿ ಮಹಾರಾಣಿ ಅಮ್ಮಣ್ಣಿ ಕಾಲೇಜು, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇಲ್ಲಿ ಹಮ್ಮಿಕೊಳ್ಳಲಾಗಿದೆ. ಬೆಂಗಳೂರು ವಿಭಾಗದ ಎಲ್ಲಾ ಕಾರ್ಯಕ್ರಮಾಧಿಕಾರಿಗಳು ಕಡ್ಡಾಯವಾಗಿ ಸಭೆಗೆ ಹಾಜರಾಗತಕ್ಕದ್ದು. ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ತಮ್ಮ ಕಾಲೇಜಿನ ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾರಿಗಳನ್ನು ಸಭೆಗೆ ತಪ್ಪದೇ ಹಾಜರಾಗಲು ಸೂಚಿಸಿ ಬಿಡುಗಡೆ ಮಾಡಲು ತಿಳಿಸಿದೆ.

ಪ್ರಯಾಣ ಭತ್ಯೆ : ಕಾರ್ಯಕ್ರಮಾಧಿಕಾರಿಗಳಿಗೆ ಪ್ರಯಾಣ ಭತ್ಯೆಯನ್ನು ಕೆ.ಸಿ.ಎಸ್.ಆರ್. ನಿಯಮ ರೀತ್ಯಾ ತಮ್ಮ ಕಾಲೇಜಿನ ಎನ್.ಎಸ್.ಎಸ್. ದೈನಂದಿನ ಚಟುವಟಿಕೆಯಲ್ಲಿ ಭರಿಸತಕ್ಕದ್ದು.

ಕಾರ್ಯಕ್ರಮಾಧಿಕಾರಿಗಳ ಗೈರು ಹಾಜರಿಯನ್ನು ಅನ್ಯಕಾರ್ಯ ನಿಮಿತ್ತವೆಂದು ಪರಿಗಣಿಸಲು ಸೂಚಿಸಲಾಗಿದೆ.

**(ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ)**

**ಎನ್.ಎಸ್.ಎಸ್. ಸಂಯೋಜನಾಧಿಕಾರಿಗಳು**
**ಪದವಿ ಪೂರ್ವ ಶಿಕ್ಷಣ ಇಲಾಖೆ**
**ಬೆಂಗಳೂರು.**

ಪ್ರತಿ

1. ಸಹಾಯಕ ನಿರ್ದೇಶಕರು ಇ-ಆಡಳಿತ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲು
2. ಕಛೇರಿ ಪತ್ರಿ.